(ಅ)ಸಿಂಧನೂರು ತಾಲ್ಲೂಕಿಗೆ ತುಂಗಭದ್ರಾ ಎಡದಂಡೆ ಕಾಲುವೆಗಳ ಅಭಿವೃದ್ಧಿಗೆ ವಿಶೇಷ ಘಟಕ ಯೋಜನೆಯಡಿ ಮಂಜೂರು ಮಾಡಿರುವ ಅನುದಾನದ ಮೊತ್ತವೆಷ್ಟು?

(ಆ) ಸಿಂಧನೂರು ತಾಲ್ಲೂಕಿಗೆ ಗಿರಿಜನ ಉಪಯೋಜನೆ ಕಾರ್ಯಕ್ರಮಗಳ ಅಡಿ 2011–12ನೇ ಸಾಲಿನಲ್ಲಿ ಮಂಜೂರು ಮಾಡಲಾಗಿರುವ ಅನುದಾನದ ಮೊತ್ತವೆಷ್ಟು;

(ಇ) ಈ ಎರಡು ಯೋಜನೆಗಳಿಗೆ ಅನುದಾನ ಬಿಡುಗಡೆಯಾಗಿದ್ದಾಗ್ಯೂ ಸಹ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಈ) ಹಾಗಿದ್ದಲ್ಲಿ, ವಿಳಂಬವಾಗಲು ಕಾರಣಗಳೇನು (ಪೂರ್ಣ ಮಾಹಿತಿ ನೀಡುವುದು)?

ಶ್ರೀಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು)

(ಅ) 2011–12ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ ಮಂಜೂರು ಮಾಡಲಾದ ವಿಶೇಷ ಘಟಕ ಯೋಜನೆ ಕಾರ್ಯಕ್ರಮದ ಮೊತ್ತ ರೂ. 395.00 ಲಕ್ಷ.

(ಆ) 2011–12ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ ಮಂಜೂರು ಮಾಡಲಾದ ಗಿರಿಜನ ಉಪಯೋಜನೆ ಕಾರ್ಯಕ್ರಮದ ಮೊತ್ತ ರೂ. 320.00 ಲಕ್ಷ.

(ಇ) ಪ್ರಸಕ್ತ ಸಾಲಿನಲ್ಲಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ ಕಾರ್ಯಕ್ರಮದಡಿ ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದ್ದು, ಕಾಮಗಾರಿಗಳ ಫಲಾನುಭವಿಗಳನ್ನು ಗುರುತಿಸುವುದು, ಅಂದಾಜು ಪಟ್ಟಿ ಸಿದ್ಧಪಡಿಸುವುದು, ತಾಂತ್ರಿಕ ಮಂಜೂರಾತಿ ನೀಡುವ ಪ್ರಕ್ರಿಯೆ ಜಾರಿಯಲ್ಲಿದೆ.

(ಈ) ಮೇಲಿನಂತೆ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಬೃಹತ್ ಮತ್ತು ಉದ್ಯಮ

390(812) ಶ್ರೀ ನಂಜುಂಡಸ್ವಾಮಿ ಜಿ.ಎನ್. (ಕೊಳ್ಳೇಗಾಲ) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯನ್ನು ಹಿಂದುಳಿದ ಜಿಲ್ಲೆ ಎಂದು ಪರಿಗಣಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ ಜಿಲ್ಲೆಗೆ ಹೊಸ ಕೈಗಾರಿಕೆ ಅಭಿವೃದ್ಧಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಜಿಲ್ಲೆಯಲ್ಲಿ ಹಾಲಿ ಎಷ್ಟು ಕೈಗಾರಿಕೆಗಳಿವೆ ಹಾಗೂ ಎಷ್ಟು ಜನರಿಗೆ ಉದ್ಯೋಗ ಕಲ್ಪಿಸಲಾಗಿದೆ?

ಶ್ರೀಮುರುಗೇಶ್ ಆರ್. ನಿರಾಣಿ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು)

(ಅ) 2009–14ರ ಕೈಗಾರಿಕಾ ನೀತಿಯಂತೆ ಚಾಮರಾಜನಗರ ತಾಲ್ಲೂಕನ್ನು ಅತ್ಯಂತ ಹಿಂದುಳಿದ ತಾಲ್ಲೂಕು ಎಂದು, ಗುಂಡ್ಲುಪೇಟೆ, ಕೊಳ್ಳೇಗಾಲ ತಾಲ್ಲೂಕುಗಳನ್ನು ಅತೀ ಹಿಂದುಳಿದ ತಾಲ್ಲೂಕುಗಳು ಎಂದು, ಯಳಂದೂರು ತಾಲ್ಲೂಕನ್ನು ಹಿಂದುಳಿದ ತಾಲ್ಲೂಕು ಎಂದು ಪರಿಗಣಿಸಲಾಗಿದೆ.

(ಆ) 2009–14ರ ಕೈಗಾರಿಕಾ ನೀತಿಯನ್ವಯ ಜಿಲ್ಲೆಯಲ್ಲಿ ಹೊಸ ಕೈಗಾರಿಕಾ ಸ್ಥಾಪಿಸುವವರಿಗೆ ವಿವಿಧ ಪ್ರೋತ್ಸಾಹ, ವಿನಾಯಿತಿ / ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. ಇದಲ್ಲದೆ ಜಿಲ್ಲೆಯ ಚಾಮರಾಜನಗರ ಮತ್ತು ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಕೈಗಾರಿಕಾ ಸ್ಥಾಪನೆಗೆ ಒಟ್ಟು 99 ನಿವೇಶನಗಳನ್ನು ಅಭಿವೃದ್ಧಿ ಪಡಿಸಲಾಗಿದ್ದು ಇವುಗಳನ್ನು ವಿವಿಧ ಕೈಗಾರಿಕೆಗಳನ್ನು ಹಂಚಿಕೆ ಮಾಡಲಾಗುತ್ತಿದೆ.

ಜಿಲ್ಲೆಯಲ್ಲಿ 8346 ಕೈಗಾರಿಕೆಗಳಿದ್ದು ಇದರಿಂದ ಸುಮಾರು 36113 ಜನರಿಗೆ ಉದ್ಯೋಗಾವಕಾಶ ಕಲ್ಪಿಸಿದೆ.

ನೇಕಾರರ ಸಮಸ್ಯೆ

391(813) ಶ್ರೀ ನಂಜುಂಡ ಸ್ವಾಮಿ (ಕೊಳ್ಳೇಗಾಲ) ಮಾನ್ಯ ಜವಳಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಚಾಮರಾಜನಗರ ಜಿಲೆಯಲ್ಲಿಯ ನೇಕಾರರು ಅರ್ಥಿಕವಾಗಿ ತುಂಬಾ ಹಿಂದುಳಿದಿದ್ದು ಬೇರೆ ಕೆಲಸಗಳು ಗೊತ್ತಿಲ್ಲದೆ ಜೀವನ ಸಾಗಿಸುವುದು ಕಷ್ಟವಾಗಿರುತ್ತದೆ; ಇವರುಗಳಿಗೆ ಪೂರ್ಣ ಉದ್ಯೋಗ/ವಿದ್ಯುತ್ ಪೂರೈಕೆ/ನೇಯ್ದ ಬಟ್ಟೆಗಳಿಗೆ ಪೂರಕ ಬೆಲೆ ನಿಗದಿಯಾಗುತ್ತಿಲ್ಲ. ಈ ಬಗ್ಗೆ ನೇಕಾರರ ಸಮಸ್ಯೆಗಳಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಚಾಮರಾಜನಗರ ಜಿಲ್ಲೆಯಲ್ಲಿ ಜವಳಿ ಪಾರ್ಕ್ ನಿರ್ಮಿಸಲು ಸರ್ಕಾರ ಆಲೋಚಿಸಿದೆಯೇ; ಇದರ ಬಗ್ಗೆ ತೆಗೆದುಕೊಂಡ ಕ್ರಮಗಳೇನು?